## **ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು**

**ವಿಷಯ:** 2018-19ನೇ ಸಾಲಿನಲ್ಲಿ ರಾಜ್ಯವಲಯ ಯೋಜನೆಯಡಿ ಅಲ್ಪಸಂಖ್ಯಾತ ಫಲಾನುಭವಿಗಳಿಗೆ **"ಬಿದಾಯಿ"** ಯೋಜನೆಯ ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲುಡಿ 257 ಎಂಡಿಎಸ್ 2018, ಬೆಂಗಳೂರು ದಿ: 06.04.2018
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 259 ಎಂಡಿಎಸ್ 2018 ದಿ: 11.04.2018

>>><<<

**ಪ್ರಸ್ತಾವನೆ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳನ್ನು 2018-19ನೇ ಆರ್ಥಿಕ ಸಾಲಿನಲ್ಲಿ ಮುಂದುವರೆಸಿ ಉಲ್ಲೇಖ (1)ರಲ್ಲಿ ಆದೇಶ ಹೊರಡಿಸಲಾಗಿದೆ. ಅದರಲ್ಲಿ **"ಬಿದಾಯಿ"** ಕಾರ್ಯಕ್ರಮವು ಸಹ ಒಂದಾಗಿರುತ್ತದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳಿಗೆ 2018-19ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತನ್ನು ಉಲ್ಲೇಖ (2)ರ ಆದೇಶದಲ್ಲಿ ಬಿಡುಗಡೆ ಮಾಡಲಾಗಿದೆ.

ಅದರಲ್ಲಿ "ಬಿದಾಯಿ" ಯೋಜನೆಗೆ ಮೊದಲನೇ ಕಂತಿನ ಅನುದಾನ ರೂ. 1666.50 (ರೂ. ಹದಿನಾರು ಕೋಟಿ ಅರವತ್ತಾರು ಲಕ್ಷಗಳು ಐವತ್ತು ಸಾವಿರ ರೂ ಮಾತ್ರ) ಗಳನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದ ಪೈಕಿ ಅಲ್ಪಸಂಖ್ಯಾತ ಫಲಾನುಭವಿಗಳಿಗೆ ಬಿದಾಯಿ ಕಾರ್ಯಕ್ರಮಕ್ಕಾಗಿ ಜಿಲ್ಲಾವಾರು ಆರ್ಥಿಕ ಹಾಗೂ ಭೌತಿಕ ಗುರಿಯನ್ನು ನಿಗದಿಪಡಿಸಿ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದ ಪ್ರಕಾರ ಸಂಬಂಧಪಟ್ಟ ಜಿಲ್ಲೆಗಳಿಗೆ ಮೊದಲನೇ ಕಂತಿನ ಅನುದಾನ( 4 ತಿಂಗಳ ಅವದಿ) ಒಟ್ಟು ರೂ1666.50 (ರೂ. ಹದಿನಾರು ಕೋಟಿ ಅರವತ್ತಾರು ಲಕ್ಷದ ಐವತ್ತು ಸಾವಿರ ರೂ ಮಾತ್ರ) ಗಳನ್ನು ಸಂಬಂಧಪಟ್ಟ ಆಯಾ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,** ರವರಿಗೆ ಮರು ಬಿಡುಗಡೆ ಮಾಡಬೇಕಾಗಿರುವುದರಿಂದ ಈ ಆದೇಶ.

## ಆ ದೇ ಶ

**ಸಂಖ್ಯೆ: ಅಸಂನಿ/ಆ/ಬಿದಾಯಿ/ಸಿಆರ್**-101:2018-19 **ದಿನಾಂಕ**:26.04.2018

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಅಲ್ಪಸಂಖ್ಯಾತ ಸಮುದಾಯದ ಫಲಾನುಭವಿಗಳಿಗೆ **"ಬಿದಾಯಿ"** ಕಾರ್ಯಕ್ರಮವನ್ನು ಜಾರಿಗೊಳಿಸಲು 2018-19ನೇ ಸಾಲಿನಲ್ಲಿ ಸರ್ಕಾರದಿಂದ ಬಿಡುಗಡೆಯಾದ ಮೊದಲನೇ ಕಂತಿನ ಅನುದಾನದಲ್ಲಿ ಜಿಲ್ಲಾವಾರು ಆರ್ಥಿಕ ಹಾಗೂ ಭೌತಿಕ ಗುರಿಯನ್ನು ನಿಗದಿಪಡಿಸಿ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದ ಪ್ರಕಾರ ಸಂಬಂಧಪಟ್ಟ ಜಿಲ್ಲೆಗಳಿಗೆ ಮೊದಲನೇ ಕಂತಿನ ಅನುದಾನ( 4 ತಿಂಗಳ ಅವದಿ) ರೂ. 1666.50 (ರೂ. ಹದಿನಾರು ಕೋಟಿ ಅರವತ್ತಾರು ಲಕ್ಷದ ಐವತ್ತು ಸಾವಿರ ರೂ ಮಾತ್ರ) ಗಳನ್ನು ಲಗತ್ತಿಸಿರುವ ಅನುಬಂಧದಲ್ಲಿ ಆಯಾ ಜಿಲ್ಲೆ ಮುಂದೆ ತೋರಿಸಿರುವ ಮೊತ್ತವನ್ನು ಸಂಬಂಧಪಟ್ಟ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,** ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

Contd....02